# ದಿನಾಂಕ:30-11-2012 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಮಂಡಿಸಲಾದ ಸಂತಾಪ ಸೂಚಕ ನಿರ್ಣಯ

## ವಿಷಯದ ಸಂಖ್ಯೆ : 306 / 2012-13

ಶ್ರೀ. ಡಿ.ವೆಂಕಟೇಶ್ ಮೂರ್ತಿ, ಮಹಾಪೌರರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

"ಬೆಂಗಳೂರು ಮಹಾನಗರ ಪಾಲಿಕೆಯ ಶ್ರೀರಾಮ ಮಂದಿರ ವಾರ್ಡ್‌ನ ಮಾಜಿ ನಗರ ಪಾಲಿಕೆ ಸದಸ್ಯರಾದ ಶ್ರೀ.ಜಿ.ಶ್ರೀನಿವಾಸ್‌ರವರು ದಿನಾಂಕ:04-11-2012 ರಂದು ಅನಾರೋಗ್ಯದಿಂದ ನಿಧನರಾಗಿರುತ್ತಾರೆ. ಸದರಿಯವರು, ನಗರ ಪಾಲಿಕೆ ಸದಸ್ಯರಾಗಿ ಲೆಕ್ಕ ಪತ್ರ ಸ್ಥಾಯಿ ಸಮಿತಿ ಹಾಗೂ ನಗರ ಯೋಜನೆ ಮತ್ತು ಅಭಿವೃದ್ಧಿ ಸ್ಥಾಯಿ ಸಮಿತಿಯ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದು, ಬೆಂಗಳೂರು ಮಹಾನಗರದ ಅಭಿವೃದ್ಧಿಗಾಗಿ ಶ್ರಮಿಸಿರುತ್ತಾರೆ. ದಿವಂಗತರು ಸಲ್ಲಿಸಿರುವ ಸೇವೆಯನ್ನು ಇಂದು ನಾವು ಎಲ್ಲರೂ ಸ್ಮರಿಸಬೇಕಾಗಿದ್ದು, ದಿವಂಗತರ ಆತ್ಮಕ್ಕೆ ಚಿರಶಾಂತಿ ಲಭಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದಾಗಿ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದುಃಖವನ್ನು ಭರಿಸುವ ಶಕ್ತಿ ದೊರೆಯಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ".

ಶ್ರೀ. ಗಂಗಭೈರಯ್ಯ ರವರು ಶ್ರೀ. ಡಿ.ವೆಂಕಟೇಶ್ ಮೂರ್ತಿ, ಮಹಾಪೌರರು ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಬೆಂಗಳೂರು ಮಹಾನಗರ ಪಾಲಿಕೆಯ ಶ್ರೀರಾಮ ಮಂದಿರ ವಾರ್ಡ್‌ನ ಮಾಜಿ ನಗರ ಪಾಲಿಕೆ ಸದಸ್ಯರಾದ ಶ್ರೀ.ಜಿ.ಶ್ರೀನಿವಾಸ್‌ರವರು ದಿನಾಂಕ: 04-11-2012 ರಂದು ಅನಾರೋಗ್ಯದಿಂದ ನಿಧನರಾಗಿರುತ್ತಾರೆ. ಸದರಿಯವರು, ನಗರ ಪಾಲಿಕೆ ಸದಸ್ಯರಾಗಿ ಲೆಕ್ಕ ಪತ್ರ ಸ್ಥಾಯಿ ಸಮಿತಿ ಹಾಗೂ ನಗರ ಯೋಜನೆ ಮತ್ತು ಅಭಿವೃದ್ಧಿ ಸ್ಥಾಯಿ ಸಮಿತಿಯ ಸದಸ್ಯರಾಗಿ ಕಾರ್ಯನಿರ್ವಹಿಸಿದ್ದು, ಬೆಂಗಳೂರು ಮಹಾನಗರದ ಅಭಿವೃದ್ಧಿಗಾಗಿ ಶ್ರಮಿಸಿರುತ್ತಾರೆ. ದಿವಂಗತರು ಸಲ್ಲಿಸಿರುವ ಸೇವೆಯನ್ನು ಇಂದು ನಾವು ಎಲ್ಲರೂ ಸ್ಮರಿಸಬೇಕಾಗಿದ್ದು, ದಿವಂಗತರ ಆತ್ಮಕ್ಕೆ ಚಿರಶಾಂತಿ ಲಭಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದಾಗಿ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದುಃಖವನ್ನು ಭರಿಸುವ ಶಕ್ತಿ ದೊರೆಯಲೆಂದು ಈ ಸಭೆಯು ಪ್ರಾರ್ಥಿಸುತ್ತದೆ".

(ಡಿ.ವೆಂಕಟೇಶ್ ಮೂರ್ತಿ)
ಮಹಾಪೌರರು